



ಅರುಣ ಪಿ. ಭಟ್ಟ

## ವಾರದ ಭವಿಷ್ಯ 9.4.2020ರಿಂದ 15.4.2020ರ ವರೆಗೆ




ಹೊಸ ಕೆಲಸಗಳಿಗೆ ಪ್ರಯತ್ನಿಸಲು ಸೂಕ್ತ ಕಾಲ. ಉದ್ಯೋಗದಲ್ಲಿ ಯಶಸ್ಸು. ಕಲೆ, ಬರವಣಿಗೆ, ವೈದ್ಯಕೀಯ, ಭದ್ರತೆ ಮತ್ತು ತಂತ್ರಜ್ಞಾನದಂತಹ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ.

ಶುಭದಿನ 9. ಗೋಪೂಜೆ ಮಾಡಿ. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ಆದಾಯ ಹೆಚ್ಚಳಕ್ಕೆ ಅವಕಾಶ ಇದೆ. ಮನೆಯಲ್ಲಿ ಸಂತೋಷವಾಗಿ ಇರುವುದರಿಂದ ನಿಮ್ಮ ಮನಸು ಕೂಡ ಸಮಾಧಾನವಾಗಿ ಇರುತ್ತದೆ. ತುಂಬ ಆಸಕ್ತಿಕರವಾದ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ.

ಶುಭದಿನ 12. ಹನುಮಾನ್ ಚಾಲಿಸ್ ಪಠಿಸಿರಿ.




ಶುಭಕಾರ್ಯ ಆಯೋಜಿಸುವ ಸಾಧ್ಯತೆ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲವಾಗಿವೆ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ ಹೆಚ್ಚುವ ಸಾಧ್ಯತೆ ಇದೆ. ಕೌಟುಂಬಿಕವಾಗಿ ಬಹಳ ನೆಮ್ಮದಿಯಾಗಿ ಇರುತ್ತೀರಿ.

ಶುಭದಿನ 14. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಸದ್ಯಕ್ಕೆ ನೀವು ಎದುರಿಸುತ್ತಿರುವ ಹಲವು ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ಕಾನೂನು ವ್ಯಾಜ್ಯಗಳಲ್ಲಿ ಜಯ. ಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ ಮಾಡುತ್ತೀರಿ. ದೂರ ಪ್ರಯಾಣ ಹಾಗೂ ಸಾಲ ಮರುಪಾವತಿಯಲ್ಲಿ ಸಮಸ್ಯೆ.

ಶುಭದಿನ 11. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಹಲವು ಸಮಸ್ಯೆಗಳು ಬಗೆಹರಿಯಲು ಸಾಧ್ಯವಾಗುತ್ತದೆ. ಇದರಿಂದ ನಿಮ್ಮ ಸಾಮರ್ಥ್ಯ, ಉತ್ಸಾಹ ಮಾಮೂಲಿಗಿಂತ ಹೆಚ್ಚಾಗುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ. ಗೃಹಾಲಂಕಾರ ವಸ್ತುಗಳನ್ನು ಖರೀದಿಸಬಹುದು.

ಶುಭದಿನ 10. ವಿಷ್ಣು ಸಹಸ್ರನಾಮ ಓದಿರಿ.




ವಾರದ ಶುರುವಿನಲ್ಲೇ ಉದ್ಯೋಗ ವಿಚಾರವಾಗಿ ಪ್ರಯಾಣ. ಕೆಲಸ ವರ್ಗಾವಣೆಯ ಸಾಧ್ಯತೆ ಇದೆ. ವ್ಯಾಪಾರ ವ್ಯವಹಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಹಿಂದಿನ ಪರಿಸ್ಥಿತಿಗೆ ಹೋಲಿಸಿದರೆ ಹೆಚ್ಚು ಅನುಕೂಲಕರವಾಗಿ ಇರಲಿದೆ.

ಶುಭದಿನ 9. ನವದುರ್ಗಾ ಆರಾಧನೆ ಮಾಡಿರಿ.




ರಚನಾತ್ಮಕ ಕಲೆ, ಸಾಹಿತ್ಯ, ಸಂಶೋಧನೆ, ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ದೊಡ್ಡ ಮಟ್ಟದಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಹುಡುಕಿಕೊಂಡು ಬರಲಿದೆ. ಇನ್ನು ಮ್ಯಾನೇಜ್‌ಮೆಂಟ್, ವಾಣಿಜ್ಯ, ಸ್ಪರ್ಧಾತ್ಮಕ ಕ್ಷೇತ್ರದಲ್ಲೂ ಯಶಸ್ಸು ದೊರೆಯಲಿದೆ.

ಶುಭದಿನ 11. ಆದಿತ್ಯ ಹೃದಯ ಪಠಿಸಿರಿ.




ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮುಗಿಸಿಕೊಳ್ಳಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಬಹುಮಾನ ಅಥವಾ ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ.

ಶುಭದಿನ 10. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತವೆ. ಬಾಕಿ ಇರುವ ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ.

ಶುಭದಿನ 9. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ. ಹಣಕಾಸು ಹೂಡಿಕೆ, ವಿದೇಶ ವ್ಯವಹಾರ ಕಾನೂನು ಕೆಲಸಗಳು ಈ ಅವಧಿಯಲ್ಲಿ ನಿಮಗೆ ಅನುಕೂಲಕರವಾಗಿ ಇವೆ. ಆಹಾರ ಪಥ್ಯ, ವ್ಯಾಯಾಮದ ಬಗ್ಗೆ ಹೆಚ್ಚು ಗಮನವಹಿಸಿ.

ಶುಭದಿನ 9. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನೀವೂ ಸಂತೋಷವಾಗಿರುತ್ತೀರಿ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮ ಸಾಮರ್ಥ್ಯ ಹಾಗೂ ಒಟ್ಟಾರೆ ಆಲೋಚನೆಯಲ್ಲಿ ಸಕಾರಾತ್ಮಕವಾದ ಪ್ರಗತಿ.

ಶುಭದಿನ 14. ಶನಿಸ್ತೋತ್ರ ಪಠಿಸಿರಿ.




ಕುಟುಂಬದವರಿಂದ ಹಾಗೂ ಸಂಬಂಧಿಕರಿಂದ ಶುಭ ಸುದ್ದಿಯನ್ನು ಕೇಳುತ್ತೀರಿ. ಈ ವರೆಗಿನ ಬಿಕ್ಕಟ್ಟು ಸಮಸ್ಯೆಗಳು ಶಮನವಾಗುತ್ತವೆ. ಧೈರ್ಯ, ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ.

ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ

ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ

